# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 09-03-2021 ಪ್ರಶ್ನೆ ಸಂಖ್ಯೆ : 133(813)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಟಿ. ಶ್ರೀಕಂಠೇಗೌಡ(ಪದವೀಧರರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 09-03-2021

ಉತ್ತರಿಸುವ ಸಚಿವರು: ಪೌರಾಡಳಿತ ಹಾಗೂ ಸಕ್ಕರೆ ಸಚಿವರು

ವಿಷಯ : ಮೈಸೂರು ಸಕ್ಕರೆ ಕಂಪನಿಯ ಬಗ್ಗೆ

(ಅ) ಮೈಸೂರು ಸಕ್ಕರೆ ಕಂಪನಿಯು ಯಾವ ವರ್ಷದಿಂದ ಕಬ್ಬು ಅರೆಯುವುದನ್ನು ಸ್ಥಗಿತಗೊಳಿಸಿದೆ;

(ಆ) ಸದರಿ ಕಾರ್ಖಾನೆ ಸ್ಥಗಿತಗೊಂಡಿರುವುದರಿಂದ, ಮಂಡ್ಯ ಜಿಲ್ಲೆಯ ಕಬ್ಬು ಬೆಳೆಗಾರರಿಗೆ ಸಂಕಷ್ಟ ಎದುರಾಗಿರುವುದು; ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಈ ಕಾರ್ಖಾನೆಯನ್ನು ಯಾವಾಗ ಆರಂಭಿಸಲಾಗುವುದು; ಹಾಗೂ ಸರ್ಕಾರಿ ಸ್ವಾಮ್ಯದಲ್ಲೆ ಈ ಕಾರ್ಖಾನೆಯನ್ನು ಮುಂದುವರೆಸಲು ಸರ್ಕಾರ ಆಲೋಚಿಸಬಾರದೇಕೆ; (ವಿವರ ನೀಡುವುದು)

(ಈ) ಸ್ವಯಂ ನಿವೃತ್ತಿ ಪಡೆಯದೆ ಉಳಿದಿರುವ ನೌಕರರಿಗೆ - ವಿವಿಧ ನಿಗಮ/ಮಂಡಳಿಗಳಿಗೆ ನೇಮಕಾತಿ ಮಾಡಲು ಸರ್ಕಾರ ಮುಂದಾಗಬಾರದೇಕೆ;

(ಉ) ಭದ್ರಾವತಿಯ ಮೈಸೂರು ಪೇಪರ್ ಮಿಲ್ ಕಾರ್ಮಿಕರ ಮಾದರಿಯಲ್ಲಿ ಈ ನೌಕರರನ್ನು ಸಹ ಇತರೆ ನಿಗಮಗಳಲ್ಲಿ ವಿಲೀನ ಮಾಡಬಾರದೇಕೆ?